ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಅಕ್ರಮವಾಗಿ ನೆಲೆಸಿರುವ ವಿದೇಶಿಯರ ಬಗ್ಗೆ

ಶ್ರೀ ಲಹರ್ ಸಿಂಗ್ ಸಿರೋಯಾ(ವಿಧಾನಸಭೆಯಿಂದ ಚುನಾಯಿತರಾದವರು) –

480 (626) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ 2020ರ ಜುಲೈ ಅಂತ್ಯಕ್ಕೆ ವೀಸಾ ಅವಧಿ ಮುಗಿದಿರುವ ವಿವಿಧ ದೇಶಗಳ ಎಷ್ಟು ವಿದ್ಯಾರ್ಥಿಗಳು ಹಾಗೂ ವಿದೇಶಿಯರು ಅಕ್ರಮವಾಗಿ ವಾಸವಾಗಿದ್ದಾರೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವೀಸಾ ಅವಧಿ ಮುಗಿದಿರುವ ವಿದ್ಯಾರ್ಥಿಗಳು ಹಾಗೂ ವಿದೇಶಿಯರು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ಇವರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಈ) ವೀಸಾ ಅವಧಿ ಮುಗಿದಿದ್ದರೂ ಅಕ್ರಮವಾಗಿ ರಾಜ್ಯದಲ್ಲಿ ನೆಲೆಸಿರುವ ವಿದೇಶಿಯರನ್ನು ವಾಪಸ್ಸು ಅವರ ದೇಶಕ್ಕೆ ಕಳುಹಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ಪೂರ್ಣ ವಿವರವನ್ನು ನೀಡುವುದು)